# News Paper Clippings

## Prajavani July 10, 2025

### ಕ್ರಿಸ್ತು ಜಯಂತಿ ಕಾಲೇಜಿಗೆ ಡೀಮ್ಡ್ ವಿ.ವಿ ಮಾನ್ಯತೆ

ಬೆಂಗಳೂರು: ಕೆ.ನಾರಾಯಣಪುರದಲ್ಲಿರುವ ಕ್ರಿಸ್ತು ಜಯಂತಿ ಕಾಲೇಜಿಗೆ (ಸ್ವಾಯತ್ತ) ಕೇಂದ್ರ ಶಿಕ್ಷಣ ಸಚಿವಾಲಯವು 'ಡೀಮ್ಡ್ ಟು ಬಿ ವಿಶ್ವವಿದ್ಯಾಲಯ'ದ ಮಾನ್ಯತೆ ನೀಡಿದೆ.

ಇದು 1999ರಲ್ಲಿ ಕಾರ್ಮೆಲೈಟ್ಸ್ ಆಫ್ ಮೇರಿ ಇಮ್ಯಾಕ್ಯುಲೇಟ್‌ನ (ಸಿಎಂಐ) ಬೋಧಿ ನಿಕೇತನ ಟ್ರಸ್ಟ್ ಅಡಿ ಸ್ಥಾಪನೆಯಾದ ಸಂಸ್ಥೆಯಾಗಿದೆ. 'ಸಂಸ್ಥೆಯು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ 26 ವರ್ಷಗಳಿಂದ ಕಾರ್ಯ-ನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿ ಮತ್ತು ಸಾಮಾಜಿಕ ಜವಾಬ್ದಾರಿಗಳನ್ನು ನಿರ್ವಹಿಸುವಲ್ಲಿ ಯಶಸ್ಸು ಸಾಧಿಸಿದೆ. ಭವಿಷ್ಯದಲ್ಲಿ ಶೈಕ್ಷಣಿಕ ಪರಿಧಿಯನ್ನು ವಿಸ್ತರಿಸಿ, ಜಾಗತಿಕ ಶಿಕ್ಷಣ ಕ್ಷೇತ್ರಕ್ಕೆ ತನ್ನದೆ ಆದ ಕೊಡುಗೆ ನೀಡಲು ಅಣಿಯಾಗುತ್ತಿದೆ' ಎಂದು ಕಾಲೇಜಿನ ಪ್ರಾಂಶುಪಾಲ ಅಗಸ್ಟಿನ್ ಜಾರ್ಜ್ ತಿಳಿಸಿದ್ದಾರೆ.

'ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿಯೂ ಅತ್ಯುತ್ತಮ ಸಾಧನೆಗಳನ್ನು ಮಾಡುತ್ತಿದೆ. ಸತತ 17ನೇ ಬಾರಿಗೆ ದಕ್ಷಿಣ ಅಂತರ ವಿಶ್ವವಿದ್ಯಾಲಯ ಸಾಂಸ್ಕೃತಿಕ ಉತ್ಸವದಲ್ಲಿ ಚಾಂಪಿಯನ್ ಕಿರೀಟ ಮುಡಿಗೇರಿಸಿ-ಕೊಂಡಿದೆ' ಎಂದು ಪ್ರಕಟಣೆಯಲ್ಲಿ ಹೇಳಿದ್ದಾರೆ.